ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಮೌ.O.P/2019-20 ದಿನಾಂಕ: 26.11.2019.

**ಸು ತ್ತೋ ಲೆ**

ವಿಷಯ: ಮೌಲ್ಯಮಾಪಕರ ಮಾಹಿತಿಯನ್ನು ಇಲಾಖೆಯ Evaluator Online Portal ನಲ್ಲಿ ದಾಖಲಿಸುವ ಬಗ್ಗೆ.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2019-20ರ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ (ಸರ್ಕಾರಿ, ಖಾಸಗಿ ಅನುದಾನಿತ, ಖಾಸಗಿ ಅನುದಾನರಹಿತ, ಬಿ.ಬಿ.ಎಂ.ಪಿ ಹಾಗೂ Bifurcated) ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವಿಷಯಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳ ಮಾಹಿತಿಯನ್ನು ಸೇವಾಪುಸ್ತಕದಲ್ಲಿರುವಂತೆ ಹೊಸದಾಗಿ ಇಲಾಖೆಯ Evaluator Online Portal ನಲ್ಲಿ ಕಡ್ಡಾಯವಾಗಿ ದಾಖಲಿಸತಕ್ಕದ್ದು. ಹಾಗೆ ದಾಖಲಿಸಿದ ನಂತರ ಮಾಹಿತಿಯನ್ನು ಮುದ್ರಿಸಿ ಒಂದು ಪ್ರತಿಯನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಸಲ್ಲಿಸುವುದು. ಜಿಲ್ಲಾ ಉಪನಿರ್ದೇಶಕರುಗಳು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಕ್ರೋಢೀಕೃತ ಪಟ್ಟಿಯನ್ನು ಕೇಂದ್ರ ಕಛೇರಿಯ ಪರೀಕ್ಷಾ ವಿಭಾಗಕ್ಕೆ ದಿನಾಂಕ 10.12.2019 ರೊಳಗೆ ಸಲ್ಲಿಸುವುದು.

ಮುಂದುವರೆದು Evaluator Online Portalನಲ್ಲಿ ಎಲ್ಲಾ ಮೌಲ್ಯಮಾಪಕರ ಮಾಹಿತಿಯನ್ನು ದಾಖಲಿಸುವುದು ಕಡ್ಡಾಯವಾಗಿದ್ದು, ವಿಶೇಷವಾಗಿ ಖಾಸಗಿ ಅನುದಾನರಹಿತ ಹಾಗೂ Bifurcated ಕಾಲೇಜಿನವರು ಹಿಂದಿನ ವರ್ಷಗಳಲ್ಲಿ ತಮ್ಮಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬಹುತೇಕ ಉಪನ್ಯಾಸಕರುಗಳ ಮಾಹಿತಿಯನ್ನು Evaluator Online Portalನಲ್ಲಿ ದಾಖಲಿಸದೇ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಇದರಿಂದ ಮೌಲ್ಯಮಾಪನ ಕಾರ್ಯ ವಿಳಂಬವಾಗುರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ.

ಆದುದರಿಂದ 2019-20ನೇ ಸಾಲಿನ ಪ್ರತಿಯೊಬ್ಬರ ಮಾಹಿತಿಯನ್ನು Upload ಮಾಡುವುದು ಸಂಬಂಧಪಟ್ಟ ಪ್ರಾಂಶುಪಾಲರ ಕರ್ತವ್ಯ ಮತ್ತು ಜವಾಬ್ದಾರಿಯಾಗಿರುತ್ತದೆ. ನಿಗಧಿತ ದಿನಾಂಕದೊಳಗೆ ಸಮರ್ಪಕ ಮಾಹಿತಿಯನ್ನು ನೋಂದಾಯಿಸದಿದ್ದಲ್ಲಿ ಶಿಕ್ಷಣ ಕಾಯ್ದೆ 2006ರ ಪ್ರಕಾರ ಕಾಲೇಜಿನ ಶೈಕ್ಷಣಿಕ ಅನುಮೋದನೆ ವಾಪಸ್ಸು ಪಡೆಯಲಾಗುವುದು ಹಾಗೂ ಕಾಲೇಜಿನ ಪ್ರಾಂಶುಪಾಲರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು ಹಾಗೂ ಸರ್ಕಾರಿ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಮಾಹಿತಿಯನ್ನು Upload ಮಾಡುವ ಕರ್ತವ್ಯ ಹಾಗೂ ಜವಾಬ್ದಾರಿ ಪ್ರಾಂಶುಪಾಲರದ್ದಾಗಿರುತ್ತದೆ. ಒಂದು ಪಕ್ಷ ಸರ್ಕಾರಿ ಕಾಲೇಜುಗಳ ಪ್ರಾಂಶುಪಾಲರ ಹಾಗೂ ಉಪನ್ಯಾಸಕರುಗಳ ಮಾಹಿತಿಯನ್ನು Upload ಮಾಡದೆಯಿರುವುದು ಕಂಡು ಬಂದಲ್ಲಿ ಸಂಬಂಧಿಸಿದ ಪ್ರಾಂಶುಪಾಲರ ವಿರುದ್ಧ CCA ನಿಯಮಗಳ ಪ್ರಕಾರ ಕ್ರಮಕೈಗೊಳ್ಳಲಾಗುವುದು. ಜಿಲ್ಲಾ ಉಪನಿರ್ದೇಶಕರುಗಳ ಸದರಿ ಕಾರ್ಯದ ಬಗ್ಗೆ ಮೇಲುಸ್ತುವಾರಿ ವಹಿಸಿ, ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಕಾಲೇಜಿನ ಪ್ರಾಂಶುಪಾಲರು / ಉಪನ್ಯಾಸಕರುಗಳು ದಿನಾಂಕ 30.11.2019 ರೊಳಗೆ ಸದರಿ ಮಾಹಿತಿಯನ್ನು Upload ಮಾಡಿರುವುದನ್ನು

ಖಾತ್ರಿಪಡಿಸಿಕೊಂಡು ದಿನಾಂಕ 10.12.2019 ರೊಳಗೆ ನಿಮ್ಮ ಜಿಲ್ಲೆಯಲ್ಲಿರುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಉಪನ್ಯಾಸಕರುಗಳ ಮಾಹಿತಿಯನ್ನು Upload ಮಾಡಿರುವ ಪಟ್ಟಿಯನ್ನು ದೃಢೀಕರಿಸಿ ಜಂಟಿನಿರ್ದೇಶಕರು (ಪರೀಕ್ಷೆ), ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಲುಪಿಸಲು ಕ್ರಮಕೈಗೊಳ್ಳುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು :

1. ರಾಜ್ಯದ ಎಲ್ಲಾ ಉಪನಿರ್ದೇಶಕರ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರ ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.